ದಿನಾಂಕಃ 24.02.2026 ರಂದು ಡಿ.ಡಬ್ಲ್ಯೂ-4 ರವರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರಿಂದಃ**

1. ಡಿಡಬ್ಲು-5 ನನ್ನ ಚಿಕ್ಕ ಚಿಕ್ಕಪ್ಪ ಎಂದರೆ ಸರಿ. ವಿಭಾಗದಲ್ಲಿ ನನ್ನ ಅಜ್ಜ ಅಜ್ಜಿಗೆ ಜಮೀನನ್ನು ಬಿಟ್ಟಿರುತ್ತಾರಾ ಎಂದರೆ ನನಗೆ ಗೊತ್ತಿಲ್ಲ. ಸದರಿ ಜಮೀನಿನ ಪೈಕಿ ಕೆಲವು ಸ್ವತ್ತುಗಳನ್ನು ನನ್ನ ಅಜ್ಜಿ ವಾದಿಗೆ ದಾನಪತ್ರ ಮಾಡಿಕೊಟ್ಟಿರುತ್ತಾರೆ ಎಂದರೆ ಗೊತ್ತಿಲ್ಲ. ನಮ್ಮ ಮತ್ತು ವಾದಿಯ ನಡುವೆ ಮನಸ್ತಾಪ ಇದೆ ಎಂದರೆ ಸರಿಯಲ್ಲ. ಈರಮ್ಮ ರವರು ವಾದಿಗೆ ವಿಲ್ ಮಾಡುವ ವಿಚಾರವನ್ನು ತಿಳಿಸಿರುತ್ತಾರಾ ಎಂದರೆ ಇಲ್ಲ 1ನೇ ಪ್ರತಿವಾದಿಗೆ ಮಾಡುವುದಾಗಿ ತಿಳಿಸಿರುತ್ತಾರೆ. 1ನೇ ಪ್ರತಿವಾದಿ ಹೆಸರಿನಲ್ಲಿ ಆಗಿರುವ ವಿಲ್ ನ್ನು ರದ್ದುಪಡಿಸಿ ವಾದಿಗೆ ವಿಲ್ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಮತ್ತು 1ನೇ ಪ್ರತಿವಾದಿ ಚೆನ್ನಾಗಿರುತ್ತೇವೆ ಆದ ಕಾರಣ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಿರುತ್ತೇನೆ.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

(ಸ್ನೇಹ ಎಂ.)
ವ್ಯವಹಾರ ನ್ಯಾಯಾಧೀಶರು,
ಮತ್ತು ಜೆ.ಎಂ.ಎಫ್.ಸಿ., ಆಲೂರು.